File No: WCDSEC/131/PHP/2019-WCD_SEC_C-WOMEN AND CHILD WELFARE SF

# ಕರ್ನಾಟಕ ಸರ್ಕಾರ

ಸಂಖ್ಯೆ:ಮಮಇ 131 ಪಿಹೆಚ್ ಪಿ 2019

ಕರ್ನಾಟಕ ಸರ್ಕಾರ ಸಚಿವಾಲಯ
3ನೇ ಗೇಟ್, ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:10.10.2019

## ಸುತ್ತೋಲೆ

ವಿಷಯ: ಎಲ್ಲಾ ಇಲಾಖೆ, ನಿಗಮ ಮಂಡಳಿಗಳಲ್ಲಿ ಅಂಗವಿಕಲರ ಕುಂದುಕೊರತೆಗಳ ನಿವಾರಣೆಗೆಂದು ಅಧಿಕಾರಿಯನ್ನು ನೇಮಿಸುವ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಅಂಗವಿಕಲ ವ್ಯಕ್ತಿಗಳ ಅಧಿನಿಯಮ-2016 ಕಲಂ 23 (1)ರಲ್ಲಿ ಎಲ್ಲಾ ಇಲಾಖೆ, ನಿಗಮ, ಮಂಡಳಿಗಳಲ್ಲಿ ಕಲಂ 19 ರಲ್ಲಿ ಅಂಗವಿಕಲರಿಗೆ ವೃತ್ತಿಪರ ತರಬೇತಿಯನ್ನು ಪಡೆಯಲು ಮತ್ತು ಸ್ವತ: ಉದ್ಯೋಗ ಮಾಡಲು ಕಾರ್ಯಕ್ರಮಗಳನ್ನು ಎಲ್ಲಾ ಇಲಾಖೆಗಳು ನಿಗಮ ಮಂಡಳಿಗಳಲ್ಲಿ ರೂಪಿಸಿ ಸೌಲಭ್ಯಗಳನ್ನು ಕಲ್ಪಿಸಲು ತಿಳಿಸಲಾಗಿದ್ದು, ಈ ಹಿನ್ನೆಲೆಯಲ್ಲಿ ಕುಂದುಕೊರತೆಗಳ ನಿವಾರಣೆಗೆಂದು ಅಧಿಕಾರಿಗಳನ್ನು ನೇಮಿಸಬೇಕು ಮತ್ತು ಅವರ ನೇಮಕಾತಿಯ ಬಗ್ಗೆ ಕೇಂದ್ರದ ಮುಖ್ಯ ಆಯುಕ್ತರು ಮತ್ತು ಆಯಾ ರಾಜ್ಯದ ಆಯುಕ್ತರಿಗೆ ತಿಳಿಸಬೇಕೆಂದು ಸೂಚಿಸಿದೆ.

ಕಲಂ 23(2) ಮೇಲಿನ ಸೆಕ್ಷನ್ 20(4) ರಲ್ಲಿ ಉದ್ಯೋಗ ಮಾಡುತ್ತಿರುವ ಅವಧಿಯಲ್ಲಿ ಉದ್ಯೋಗಿಗೆ ಅಂಗವಿಕಲತೆ ಉಂಟಾದರೆ ಅವರನ್ನು ಕೆಲಸದಿಂದ ತೆಗೆದು ಹಾಕುವಂತಿಲ್ಲ ಅಥವಾ ಹಿಂಬಡ್ತಿ ನೀಡುವಂತಿಲ್ಲವೆಂದೂ ಇರುತ್ತದೆ. ಈ ಅಪವಾದಗಳಡಿ ತೆಗೆದು ಕೊಂಡಿರುವ ಕ್ರಮಗಳ ಬಗ್ಗೆ ಯಾರಿಗಾದರೂ ಆಕ್ಷೇಪಣೆ ಇದ್ದರೆ, ಅವರು ಕುಂದುಕೊರತೆ ಅಧಿಕಾರಿಗಳಿಗೆ ದೂರು ನೀಡಬಹುದು ಸದರಿ ಅಧಿಕಾರಿ ತನಿಖೆ ಮಾಡಿ ಅದರ ನಿರ್ವಹಣೆಗೆ ಸ್ಥಾಪನೆಯ ಅಧಿಕಾರಿಗಳೊಡನೆ ಸಮಾಲೋಚಿಸಿ ಕ್ರಮತೆಗೆದುಕೊಳ್ಳಲು ತಿಳಿಸಲಾಗಿದೆ.

ಸದರಿ ಕಲಂ ಪ್ಯಾರ (3) ರಲ್ಲಿ ಕುಂದು ನಿವಾರಣಾ ಅಧಿಕಾರಿ ಸರ್ಕಾರ ತಿಳಿಸಿರುವ ಮಾದರಿಯಲ್ಲಿ ಎಲ್ಲಾ ದೂರುಗಳ ದಾಖಲೆ ಇಡಬೇಕು ಮತ್ತು ದೂರು ನೀಡಿದ ಎರಡು ವಾರದೊಳಗೆ ವಿಚಾರಣೆ ಮಾಡಬೇಕು ಎಂದು ತಿಳಿಸಲಾಗಿದೆ.

ಕಲಂ ಪ್ಯಾರ (4)ರಲ್ಲಿ ದೂರು ನೀಡಿದ ಉದ್ಯೋಗಿಗೆ ದೂರಿನ ಬಗ್ಗೆ ತೆಗೆದುಕೊಳ್ಳಲಾಗಿರುವ ಕ್ರಮದ ಬಗ್ಗೆ ಅಸಮಾಧಾನ ಇದ್ದರೆ ಅವರು ಜಿಲ್ಲಾ ಮಟ್ಟದ ಅಂಗವಿಕಲರ ಸಮಿತಿಯ ಮುಂದೆ ದೂರನ್ನು ನೀಡಬಹುದೆಂದು ತಿಳಿಸಲಾಗಿದೆ.

ಆದ್ದರಿಂದ ಅಂಗವಿಕಲ ವ್ಯಕ್ತಿಗಳ ಅಧಿನಿಯಮ 2016ರಡಿ ಕಲಂ 23ರಲ್ಲಿ ಅಗತ್ಯಪಡಿಸಿರುವಂತೆ ಎಲ್ಲಾ ಸರ್ಕಾರಿ ಇಲಾಖೆಗಳು ಸಂಸ್ಥೆ, ನಿಗಮ, ಮಂಡಳಿ ಹಾಗೂ ಆಯೋಗಗಳು ಅಂಗವಿಲರ ಕುಂದು ಕೊರತೆ ನಿವಾರಿಸಲು ಅಧಿಕಾರಿಯೊಬ್ಬರನ್ನು ನೇಮಿಸುವಂತೆ ತಿಳಿಸಿದೆ.

1093
12/10/19
12/10/2019

(ರಾಕೇಶ್ ಸಿಂಗ್)
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರೀಕರ
ಸಬಲೀಕರಣ ಇಲಾಖೆ, ಬೆಂಗಳೂರು

ಪ್ರತಿಯನ್ನು:

1. ಎಲ್ಲಾ ಇಲಾಖೆಗಳ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಗೆ ಮುಂದಿನ ಕ್ರಮಕ್ಕಾಗಿ.
2. ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ನಿರ್ದೇಶನಾಲಯ, ಬೆಂಗಳೂರು.
3. ಕಛೇರಿ ಪ್ರತಿ.